# ನಗರ ಸ್ಥಳೀಯ ಸಂಸ್ಥೆ ಚುನಾವಣೆಗೆ ಮುಹೂರ್ತ

ರಾಜ್ಯದ 2 ಮಹಾನಗರ ಪಾಲಿಕೆ, 6 ನಗರಸಭೆ, 3 ಪುರಸಭೆ, 3 ಪಟ್ಟಣ ಪಂಚಾಯತಿಗಳಿಗೆ ನವೆಂಬರ್ 12ರಂದು ಚುನಾವಣೆ ನಡೆಯಲಿದೆ.

ಈ ಹಿಂದೆಯೇ ರಾಜ್ಯ ಚುನಾವಣಾ ಆಯೋಗವು ಜಿಲ್ಲಾ/ತಾಲೂಕು ಪಂಚಾಯತಿ ಹಾಗೂ ಗ್ರಾಮ ಪಂಚಾಯತಿ ಕ್ಷೇತ್ರಗಳಿಗೆ ಕೂಡ ಚುನಾವಣೆ ಪ್ರಕಟಿಸಿತ್ತು. ಆಯೋಗ ಅಕ್ಟೋಬರ್ 20ರಿಂದಲೇ ಚುನಾವಣೆ ನಡೆಯಲಿರುವ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನೀತಿ ಸಂಹಿತೆ ಜಾರಿಗೊಳಿಸಿತ್ತು. ಕಳೆದ ಅ.31ಕ್ಕೆ ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿತ್ತು. ನಾಮಪತ್ರ ಹಿಂಪಡೆಯಲು ಇದೇ ನ. 4ರವರೆಗೂ ಮಾತ್ರ ಅವಕಾಶ ಮಾಡಿಕೊಡಲಾಗಿತ್ತು. ಮಂಗಳೂರು ಮಹಾನಗರ ಪಾಲಿಕೆ, ಶಿವಮೊಗ್ಗ ಜಿಲ್ಲೆಯ ಜೋಗ್ ಕಾರ್ಗಲ್ ಪಟ್ಟಣ ಪಂಚಾಯತಿ, ಬಳ್ಳಾರಿ ಕಂಪ್ಲಿ ಪುರಸಭೆ, ಕೂಡ್ಲಿಗಿ ಪಟ್ಟಣ ಪಂಚಾಯತಿ ಸೇರಿದಂತೆ 14 ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಯಲಿದೆ ಎಂದು ರಾಜ್ಯ ಚುನಾವಣಾ ಆಯೋಗ ತಿಳಿಸಿದೆ.

ಸ್ಥಳೀಯ ಸಂಸ್ಥೆಗಳ 1388 ಮತಗಟ್ಟೆಗಳಲ್ಲಿ, 13,04,614 ಮತದಾರರು ಮತ ಚಲಾವಣೆ ಮಾಡಲಿದ್ದಾರೆ. ಈ ಚುನಾವಣೆಗೆ ನ. 12 ರಂದು ಬೆಳಗ್ಗೆ 7 ರಿಂದ ಸಂಜೆ 5 ಗಂಟೆವರೆಗೆ ಮತದಾನ ನಡೆಯಲಿದೆ. ಇನ್ನೇನಾದರೂ ಮರು ಮತದಾನ ಇದ್ದಲ್ಲಿ ನ.13 ರಂದು ಬೆಳಗ್ಗೆ 7 ರಿಂದ ಸಂಜೆ 5 ಗಂಟೆವರೆಗೆ ನಡೆಯಲಿದೆ. ನಂತರ ನ. 14 ರಂದು ಆಯಾ ತಾಲೂಕು ಕೇಂದ್ರ ಸ್ಥಳದಲ್ಲಿ ಮತಗಳ ಎಣಿಕೆ ನಡೆಯಲಿದ್ದು ಅಂದೇ ಫಲಿತಾಂಶ ಹೊರಬೀಳಲಿದೆ. ಮತದಾನದ ಹಿನ್ನೆಲೆಯಲ್ಲಿ ಚುನಾವಣೆ ನಡೆಯುವ ಪ್ರದೇಶಗಳಲ್ಲಿ ರಾಜ್ಯ ಸರ್ಕಾರಿ ಕಚೇರಿಗಳು, ಶಾಲಾ-ಕಾಲೇಜುಗಳಿಗೆ (ಅನುದಾನಿತ ಶಿಕ್ಷಣ ಸಂಸ್ಥೆಗಳು ಒಳಗೊಂಡಂತೆ) ರಾಜ್ಯ ಚುನಾವಣಾ ಆಯೋಗ ರಜೆ ಘೋಷಿಸಿ ಆದೇಶ ಹೊರಡಿಸಿದೆ.

## ಚುನಾವಣೆ ನಡೆಯಲಿರುವ ಜಿಲ್ಲೆಗಳು ನಗರ ಸ್ಥಳೀಯ ಸಂಸ್ಥೆಗಳ ಹೆಸರು

- ದಾವಣಗೆರೆ: ದಾವಣಗೆರೆ ಮಹಾನಗರ ಪಾಲಿಕೆ
- ದಕ್ಷಿಣ ಕನ್ನಡ: ಮಂಗಳೂರು ಮಹಾನಗರ ಪಾಲಿಕೆ
- ಕೋಲಾರ: ಕೋಲಾರ ನಗರಸಭೆ, ಮುಳಬಾಗಿಲು ನಗರಸಭೆ, ಕೆಜಿಎಫ್ ನಗರಸಭೆ
- ಚಿಕ್ಕಬಳ್ಳಾಪುರ: ಗೌರಿಬಿದನೂರು ನಗರಸಭೆ, ಚಿಂತಾಮಣಿ ನಗರಸಭೆ
- ರಾಮನಗರ: ಕನಕಪುರ ನಗರಸಭೆ, ಮಾಗಡಿ ಪುರಸಭೆ
- ಶಿವಮೊಗ್ಗ: ಜೋಗ ಕಾರ್ಗಲ್ ಪಟ್ಟಣ ಪಂಚಾಯತ್
- ಚಿಕ್ಕಮಗಳೂರು: ಬೀರೂರು ಪುರಸಭೆ
- ಧಾರವಾಡ: ಕುಂದಗೋಳ ಪಟ್ಟಣ ಪಂಚಾಯತ್
- ಬಳ್ಳಾರಿ: ಕಂಪ್ಲಿ ಪುರಸಭೆ , ಕೂಡ್ಲಗಿ ಪಟ್ಟಣ ಪಂಚಾಯತ್

## ಉಪ ಚುನಾವಣೆ ನಡೆಯುವ ಜಿಲ್ಲೆಗಳು

- ಹೊಳೆನರಸೀಪುರ ಪುರಸಭೆ ವಾರ್ಡ್ ನಂ.4
- ಕೊಳ್ಳೆಗಾಲ ನಗರಸಭೆ ವಾರ್ಡ್ ನಂ.19
- ಚಡಚಣ ಪಟ್ಟಣ ಪಂಚಾಯತ್ ವಾರ್ಡ್ ನಂ.5
- ಮಹಾಲಿಂಗಪುರ ಪುರಸಭೆ ವಾರ್ಡ್ ನಂ.17
- ಚಿತ್ತಾಪುರ ಪುರಸಭೆ ವಾರ್ಡ್ ನಂ.1